ಸಾರ್ವಜನಿಕ ಗ್ರಂಥಾಲಯ

2471(3383); ಶ್ರೀ ಜಗದೀಶ್ ಕುಮಾರ್ ಆರ್. (ಹೆಬ್ಬಾಳ)

ಅ) ಸಾರ್ವಜನಿಕ ಗ್ರಂಥಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಸದರಿ ಹೊರಗುತ್ತಿಗೆ ನೌಕರರಿಗೆ ಸಂದಾಯವಾಗುತ್ತಿರುವ ವೇತನವೆಷ್ಟು;

ಇ) ಸದರಿ ನೌಕರರಿಗೆ ಕಳೆದ 5–6 ತಿಂಗಳಿಂದ ಸಂಬಳ ಪಾವತಿಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ವಿಚಾರದ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸಾರ್ವಜನಿಕ ಗ್ರಂಥಾಲಯಗಳಲ್ಲಿ ಹೊರ ಗುತ್ತಿಗೆ ನೌಕರರು ಕಾರ್ಯ ನಿರ್ವಹಿಸುತ್ತಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಅಂಗನವಾಡಿ ಕಟ್ಟಡಗಳು

2472(3384); ಶ್ರೀ ಜಗದೀಶ್ ಕುಮಾರ್ .ಆರ್. (ಹೆಬ್ಬಾಳ)

ಅ) ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿರುವ ಅಂಗನವಾಡಿಗಳು ಸ್ವಂತ ಕಟ್ಟಡ ಹೊಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು (ಮಾಹಿತಿ ಒದಗಿಸುವುದು);

ಆ) ಖಾಸಗಿ ಕಟ್ಟಡಗಳಲ್ಲಿ ಅಂಗನವಾಡಿಗಳನ್ನು ನಡೆಸಲು ನೀಡುವ ಬಾಡಿಗೆ ಮತ್ತು ಮುಂಗಡ ಹಣವೆಷ್ಟು;

ಇ) ಸದರಿ ಕಟ್ಟಡಗಳನ್ನು ಬಾಡಿಗೆಗೆ ಪಡೆಯಲು ಮುಂಗಡ ಹಣ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ, ಇದರ ಬಗ್ಗೆ ಸರ್ಕಾರದ ನಿಲುವೇನು?